ಕರ್ನಾಟಕ ಸರ್ಕಾರ

ಸಹಕಾರ ಇಲಾಖೆ

ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಅಸ್ಕರ್ ರಸ್ತೆ, ಬೆಂಗಳೂರು-52

ಸಂಖ್ಯೆ.ಆರ್‌ಎಸ್‌ಆರ್/ಎಕ್ಸ್‌ಎಂಸಿ/66/2017-18 ದಿ:6 -07-2017

# ಸುತ್ತೋಲೆ-261

ವಿಷಯ: ಸಹಕಾರ ಸಂಘಗಳು ಶಿಷ್ಟಾಚಾರ ಪಾಲನೆ ಮಾಡುವ ಬಗ್ಗೆ.

*********

ಸಂವಿಧಾನದ ಚೌಕಟ್ಟಿನಲ್ಲಿ ಆಯ್ಕೆಗೊಂಡ ಜನಪ್ರತಿನಿಧಿಗಳಿಗೆ ಗೌರವ ನೀಡುವುದು ನಮ್ಮೆಲ್ಲರ ಆದ್ಯ ಕರ್ತವ್ಯ.

ರಾಜ್ಯದಲ್ಲಿರುವ ಸಹಕಾರ ಸಂಘಗಳು ಏರ್ಪಡಿಸುವ ವಿವಿಧ ಸಮಾರಂಭಗಳಲ್ಲಿ ಸರ್ಕಾರದ ಆದೇಶದ ಪ್ರಕಾರ ಶಿಷ್ಟಾಚಾರ ಪಾಲನೆ ಮಾಡದೆ ಜನಪ್ರತಿನಿಧಿಗಳಿಗೆ ಸಮಾರಂಭಕ್ಕೆ ಆಹ್ವಾನಿಸುತ್ತಿಲ್ಲವೆಂಬ ದೂರುಗಳು ಬರುತ್ತಿವೆ.

ಶಿಷ್ಟಾಚಾರ ಪಾಲನೆ ಬಗ್ಗೆ ಸರ್ಕಾರವು ಈಗಾಗಲೇ ಆದೇಶ ಹೊರಡಿಸಿದೆ. ಈ ಆದೇಶದ ಚೌಕಟ್ಟಿನಲ್ಲಿ ರಾಜ್ಯದಲ್ಲಿರುವ ಸಹಕಾರ ಸಂಘಗಳು ಜನಪ್ರತಿನಿಧಿಗಳಿಗೆ ಗೌರವ ಸೂಚಕವಾಗಿ ಸಮಾರಂಭಕ್ಕೆ ಆಹ್ವಾನಿಸಲು ತಿಳಿಸಿದೆ.

ವಿಶೇಷವಾಗಿ ಸರ್ಕಾರದಿಂದ ಆರ್ಥಿಕ ಸಹಾಯ ಪಡೆಯುವ ಸಹಕಾರ ಸಂಘಗಳು ಸರ್ಕಾರದ ಆದೇಶದ ಪ್ರಕಾರ ಶಿಷ್ಟಾಚಾರ ಪಾಲನೆ ಮಾಡಿ ಸ್ಥಳೀಯ ಜನಪ್ರತಿನಿಧಿಗಳನ್ನು ಸಮಾರಂಭಕ್ಕೆ ಆಹ್ವಾನಿಸಿ, ಸೌಹಾರ್ದಯುತ ವಾತಾವರಣದಲ್ಲಿ ಸಭೆ ಸಮಾರಂಭಗಳು ಜರುಗಲು ಅವಕಾಶ ನೀಡುವಂತೆ ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಿಸಿದ ಸಹಕಾರ ಸಂಘಗಳಿಗೆ ಈ ಮೂಲಕ ಸೂಚಿಸಿದೆ.

(ಎಂ.ಕೆ.ಅಯ್ಯಪ್ಪ)
ಸಹಕಾರ ಸಂಘಗಳ ನಿಬಂಧಕರು,
ಕರ್ನಾಟಕ ರಾಜ್ಯ, ಬೆಂಗಳೂರು.

ಗೆ,

1. ಕೇಂದ್ರ ಕಛೇರಿಯ ಎಲ್ಲಾ ಶಾಖಾ ಮುಖ್ಯಸ್ಥರು,
2. ಎಲ್ಲಾ ಸಹಕಾರ ಸಂಘಗಳ ಪ್ರಾಂತೀಯ ಜಂಟಿ ನಿಬಂಧಕರು, } ಎಲ್ಲಾ ತಮ್ಮ ವ್ಯಾಪ್ತಿಯ ಸಹಕಾರ
3. ಎಲ್ಲಾ ಸಹಕಾರ ಸಂಘಗಳ ಉಪನಿಬಂದಕರು, } ಸಂಘಗಳಿಗೆ ತಲುಪಿಸಲು
4. ಎಲ್ಲಾ ಉಪವಿಭಾಗೀಯ ಸಹಕಾರ ಸಂಘಗಳ } ಸೂಚಿಸಿದೆ.
   ಸಹಾಯಕ ನಿಬಂಧಕರು,
5. ಎಲ್ಲಾ ತಾಲ್ಲೂಕು ಸಹಕಾರ ಅಭಿವೃದ್ಧಿ ಅಧಿಕಾರಿಗಳಿಗೆ,
6. ಇಲಾಖಾ ಜಾಲಾ ತಾಣ ಸಹಕಾರ ಸಿಂಧುವಿನಲ್ಲಿ ಪ್ರಕಟಣೆ.